ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿ:20-01-2021

-: ಸುತ್ತೋಲೆ :-

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಸಂಬಂಧ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 01 ಟಿಪಿಇ 2021, ದಿನಾಂಕ:07-01-2021
2. ಸರ್ಕಾರದ ಪತ್ರ ಸಂಖ್ಯೆ: ಯುಸಕ್ರೀ 63 ಅಮುಕಾ 2020, ದಿನಾಂಕ:16-12-2020

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳನ್ವಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯೋಜನೆಗಳ ಅನುಷ್ಠಾನದಲ್ಲಿ ಯುವಜನರ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಪ್ರಮುಖವಾದ ಯೋಜನೆಗಳನ್ನು ಉಲ್ಲೇಖ(2)ರ ಪತ್ರದಲ್ಲಿ ವಿವರವಾದ ವಿವರಣೆಯನ್ನು ನೀಡಲಾಗಿದೆ.(ಉಲ್ಲೇಖ(2)ರ ಪ್ರತಿ ಲಗತ್ತಿಸಿದೆ)

ಈ ಸಂಬಂಧ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯೊಂದಿಗೆ ತಾಂತ್ರಿಕ ಶಿಕ್ಷಣ ಇಲಾಖೆ ಕೈಜೋಡಿಸಿ, ನಿರಂತರವಾಗಿ ಕಾರ್ಯ ನಿರ್ವಹಿಸಬೇಕಾಗಿರುತ್ತದೆ ಮತ್ತು ಈ ಸಾಧನೆಯನ್ನು ನಿಗಧಿತ ಚೌಕಟ್ಟಿನಲ್ಲಿ ರೂಪಿಸಿಕೊಳ್ಳಬೇಕಾಗಿರುವುದರಿಂದ ಈ ಇಲಾಖೆಗಳು ಒಡಂಬಡಿಕೆ (MOU) ಮಾಡಿಕೊಳ್ಳಬೇಕಾಗಿರುತ್ತದೆ.

ಆದುದರಿಂದ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಸಾಧನೆ ಮಾಡುವ ಸಾಮರ್ಥ್ಯವುಳ್ಳ/ಉತ್ತಮ ಸಾಧನೆ ಮಾಡಿರುವ ಪ್ರತಿಭಾವಂತ ಕ್ರೀಡಾಪಟುಗಳು ತಾಲ್ಲೂಕು/ಜಿಲ್ಲಾ/ರಾಜ್ಯ/ರಾಷ್ಟ್ರ/ಅಂತರ್ ರಾಷ್ಟ್ರೀಯ ಮಟ್ಟದಲ್ಲಿ ಮತ್ತು ಒಲಂಪಿಕ್ಸ್/ಏಷಿಯನ್ ಗೇಮ್ಸ್/ಕಾಮನ್ ವೆಲ್ತ್ ಗೇಮ್ಸ್/ವರ್ಲ್ಡ ಚಾಂಪಿಯನ್ ಷಿಪ್ ಗಳಲ್ಲಿ ಭಾಗವಹಿಸಿದವರ ಮತ್ತು ಪದಕ ವಿಜೇತರಾದವರ ಪಟ್ಟಿಯನ್ನು ಮತ್ತು ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರುಗಳ ಮಾಹಿತಿಯನ್ನು ಕೊಟ್ಟಿರುವ ಲಿಂಕ್‌ನ್ನು ಉಪಯೋಗಿಸಿ, Google Form ನ್ನು ಭರ್ತಿ ಮಾಡಿ ದಿನಾಂಕ: 30-01-2021 ರೊಳಗೆ ಸಲ್ಲಿಸಲು ಎಲ್ಲಾ ಪ್ರಾಚಾರ್ಯರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:-

1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂ.ಶಿ.ನಿ, ಬೆಂಗಳೂರು ಇವರಿಗೆ ಡಿ.ಟಿ.ಇ ವೆಬ್ ಸೈಟ್ ನಲ್ಲಿ ಪ್ರಕಟಿಸುವುದು.
3. ಎಲ್ ಆರ್ ಡಿಸಿ ಕಡತಕ್ಕೆ